Received on 22/7/20
WUP.

**ಕರ್ನಾಟಕ ಸರ್ಕಾರ**
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: DCE/TRN/DEP/2/2020-TDG

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:03-07-2020

# ಸುತ್ತೋಲೆ

ವಿಷಯ: ವಯೋ ನಿವೃತ್ತಿ/ಸ್ವಯಂ ನಿವೃತ್ತಿ ಹೊಂದಲಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ನಿಯೋಜನೆ ರದ್ದುಪಡಿಸುವ ಬಗ್ಗೆ

*****

ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ಬೋಧಕೇತರ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಮೂಲ ಕಛೇರಿ/ಕಾಲೇಜುಗಳಿಂದ ಬೇರೆ ಕಛೇರಿ/ಕಾಲೇಜುಗಳಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, ವಯೋ ನಿವೃತ್ತಿ/ಸ್ವಯಂ ನಿವೃತ್ತಿ ಹೊಂದುವ ಸಂದರ್ಭದಲ್ಲಿ ನಿವೃತ್ತಿ ಹೊಂದುವ 15 ದಿನಗಳ ಪೂರ್ವದಲ್ಲಿ ನಿಯೋಜಿತ ಕಛೇರಿ/ಕಾಲೇಜಿನಿಂದ ಬಿಡುಗಡೆಗೊಂಡು ಮೂಲ ಕಛೇರಿ/ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗಲು ಸೂಚಿಸಿದೆ.

ಒಂದು ವೇಳೆ ಸಹ/ಸಹಾಯಕ ಪ್ರಾಧ್ಯಾಪಕರು ನಿಯೋಜಿತ ಕಾಲೇಜಿನ ಪ್ರಾಂಶುಪಾಲರ ಪ್ರಭಾರ ವಹಿಸಿಕೊಂಡಿದ್ದಲ್ಲಿ, ಪ್ರಭಾರವನ್ನು ಅದೇ ಕಾಲೇಜಿನ ಸೇವಾ ಜ್ಯೇಷ್ಠತೆಯಲ್ಲಿ ಹಿರಿಯರಾದ ಸಹ/ಸಹಾಯಕ ಪ್ರಾಧ್ಯಾಪಕರಿಗೆ ವಹಿಸಿ ಬಿಡುಗಡೆಗೊಂಡು ಮೂಲ ಕಾಲೇಜಿನಲ್ಲಿ ವರದಿ ಮಾಡಿಕೊಳ್ಳಲು ಸೂಚಿಸಿದೆ. ಈ ಕುರಿತು ಯಾವುದೇ ಪ್ರತ್ಯೇಕ ಆದೇಶ ಹೊರಡಿಸಲಾಗುವುದಿಲ್ಲ.

***(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)***

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ:**

1. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿಗಾಗಿ.
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
4. ಕಛೇರಿ ಪ್ರತಿ.

*DCE 2 Circular*